ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ (ಭರವಸೆಗಳ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 15/06/2019

# ಹಸ್ತಕ್ಷೇಪ: ಎಟಿಆರ್ ರಾಜೀನಾಮೆ?

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

> **6 ಸಚಿವ ರೇವಣ್ಣ ಅವರು ತಮ್ಮ ಸಮಿತಿಯ ಕಾರ್ಯಗಳಲ್ಲಿ ಮತ್ತು ಶಾಸಕರಾಗಿಯೂ ತಮ್ಮ ಕ್ಷೇತ್ರದಲ್ಲಿ ನಡೆಸಬೇಕಾದ ಕಾಮಗಾರಿಗಳು ಇನ್ನಿತರ ವಿಚಾರಗಳಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ. ಇದನ್ನು ಪ್ರಶ್ನಿಸಲು ಸಾಧ್ಯವಾಗುತ್ತಿಲ್ಲ.**
>
> **ಎ.ಟಿ ರಾಮಸ್ವಾಮಿ**
>
> ಸರಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷ

ಒತ್ತುವರಿ ತೆರವು ಕಾರ್ಯಾಚರಣೆ ವಿಳಂಬ ಮತ್ತು ಸಮಿತಿಯಲ್ಲಿ ಕೆಲವರ ಅನಪೇಕ್ಷಿತ ಹಸ್ತಕ್ಷೇಪಕ್ಕೆ ಬೇಸತ್ತು ಸರಕಾರಿ ಭರವಸೆಗಳ



ಸಮಿತಿಯ ಅಧ್ಯಕ್ಷ ಸ್ಥಾನಕ್ಕೆ ಎ.ಟಿ ರಾಮಸ್ವಾಮಿ ರಾಜೀನಾಮೆ ನೀಡಿದ್ದಾರೆ ಎನ್ನಲಾಗಿದೆ.

ರಾಜೀನಾಮೆ ನೀಡಲು ಅವರು ಸಮಿತಿಯ ಕಾರ್ಯವ್ಯಾಪ್ತಿಯಲ್ಲಿ ಕೆಲ ಸಚಿವರ ಹಸ್ತಕ್ಷೇಪ ಹೆಚ್ಚಾಗುತ್ತಿದೆ. ಈ ಹಿಂದೆ ಒತ್ತುವರಿ ತೆರವಿಗೆ ಸಂಬಂಧಿಸಿ ತಾವು ಮಾಡಿದ್ದ ಅನೇಕ ಕೆಲಸಗಳಿಗೆ ಅಡ್ಡಿಪಡಿಸುವ ಕೆಲಸವನ್ನು ಕೆಲ ಸಚಿವರು ಮಾಡುತ್ತಿದ್ದಾರೆ ಎಂಬ ಬೇಸರದಿಂದ ರಾಮಸ್ವಾಮಿ ಅವರು ಈ ತೀರ್ಮಾನ ತೆಗೆದುಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ.

ಎ.ಟಿ ರಾಮಸ್ವಾಮಿ ಅವರು ವಿಧಾನಸೌಧದಲ್ಲಿ ಶುಕ್ರವಾರ ಬೆಳಗ್ಗೆ ನಡೆದ ಸಮಿತಿಯ ಸಭೆಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ್ದರು, ನಂತರ ಸಂಜೆ ವೇಳೆಗೆ ರಾಜೀನಾಮೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಆದರೆ, ಸ್ಪೀಕರ್ ಕಚೇರಿಯಿಂದ ಈ ಬಗ್ಗೆ ದೃಢಪಡಿಸಿಲ್ಲ. ವಿಧಾನಸಭೆ ಸ್ಪೀಕರ್ ರಮೇಶ್ ಕುಮಾರ್ ಅವರು ಕೂಡ ಹಾಸನ ಪ್ರವಾಸದಲ್ಲಿದ್ದು, ಅಲ್ಲಿಯೇ ಭೇಟಿ ಮಾಡಿದ ರಾಮಸ್ವಾಮಿ ಅವರು ತಮ್ಮ ರಾಜೀನಾಮೆ ನೀಡಿದ್ದಾರೆ ಎನ್ನಲಾಗಿದೆ.

ಶುಕ್ರವಾರ ಬೆಳಗ್ಗೆ ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ರಾಮಸ್ವಾಮಿ, ನಗರದ ಬಿಎಂ ಕಾವಲಿನ ಸರ್ವೇ ನಂಬರ್ 137ರಲ್ಲಿ ಸರಕಾರಿ ಭೂಮಿ ಒತ್ತುವರಿ ಮಾಡಿಕೊಂಡಿರುವ ಭೂಗಳ್ಳರ ವಿರುದ್ಧ ಕೂಡಲೇ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಇಲ್ಲದಿದ್ದರೆ ನನ್ನ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂದು ಎಚ್ಚರಿಕೆ ನೀಡಿದ್ದರು.

ಜೀವ ಪಣಕ್ಕಿಟ್ಟು ಭೂಮಿ ಉಳಿಸಿಕೊಳ್ಳಲು ಹೋರಾಟ ಮಾಡಿಕೊಂಡು ಬಂದಿದ್ದೇವೆ. ಆದರೆ, ಭೂಗಳ್ಳತನ ಮುಂದುವರಿದಿದೆ. ಬಿಎಂ ಕಾವಲಿನ ಸರ್ವೇ ನಂಬರ್ 137ರಲ್ಲಿ 305 ಎಕರೆಯಷ್ಟು ಸರಕಾರಿ ಭೂಮಿಯ ಅತಿಕ್ರಮವಾಗಿದೆ. ಈ ಅಕ್ರಮದಲ್ಲಿ ಪಾಲ್ಗೊಂಡಿರುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಇಂತಹವರ ವಿರುದ್ಧ ಸರಕಾರ ಕ್ರಮ ಕೈಗೊಳ್ಳಲು ಮುಂದಾಗದಿದ್ದರೆ ನನ್ನ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂದು ತಿಳಿಸಿದರು.

ಇದು ಗಂಭೀರ ಪ್ರಕರಣವಾಗಿದ್ದು, ಸಮಿತಿ ಇದನ್ನ ಇತ್ಯರ್ಥ ಮಾಡಲು ನಿರ್ಧರಿಸಿದೆ. ಅತ್ಯಂತ ಬೆಲೆ ಬಾಳುವ ಜಮೀನಿನ ರಕ್ಷಣೆ ಮಾಡಬೇಕಾದ ಅಧಿಕಾರಿಗಳು ಬೇರೆಯವರಿಗೆ ಅಕ್ರಮ ಪರಭಾರೆ ಮಾಡಿದ್ದಾರೆ. ಇದೊಂದು ವಿಶ್ವಾಸಾರ್ಹ ದ್ರೋಹವಾಗಿದ್ದು, ಈ ವಿಚಾರದಲ್ಲಿ ಸರಕಾರ ಮೌನ ವಹಿಸಿದೆ ಎಂದರೇನು ಅರ್ಥ ಎಂದು ಖಾರವಾಗಿ ಪ್ರಶ್ನಿಸುವ ಜತೆಗೆ ಕಂದಾಯ ಸಚಿವರು ತಪ್ಪಿತಸ್ಥರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಭರವಸೆ ನೀಡಿದ್ದರು. ಆದರೆ, ಈವರೆಗೂ ಏನು ಕ್ರಮ ಜರುಗಿಸಿಲ್ಲ. ಇದಕ್ಕೆ ಅಧಿಕಾರಿಗಳು ಉತ್ತರ ಕೊಡಬೇಕು ಎಂದು ಕಿಡಿಕಾರಿದ್ದರು.